ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	775
ಸದಸ್ಯರ ಹೆಸರು	:	ಶ್ರೀ ಬಸವರಾಜ್ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	17.09..2021
ಉತ್ತರಿಸುವ ಸಚಿವರು	:	ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ	2020-21ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಶಾಸಕರಿಗೆ ಮಂಜೂರಾದ ಅನುದಾನವನ್ನು ಬಿಡುಗಡೆ ಮಾಡದೆ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	-ಇಲ್ಲ-
ಆ	ಬಂದಿದ್ದಲ್ಲಿ, ಏತಕ್ಕಾಗಿ ಅನುದಾನ ಬಿಡುಗಡೆ ಮಾಡಿಲ್ಲ ಮತ್ತು ಕಲ್ಯಾಣ ಕರ್ನಾಟಕದ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಗೆ ಒಳಪಟ್ಟ ಶಾಸಕರ ಅನುದಾನ ಕಡಿತಗೊಳಿಸಿದ್ದು, ಎಷ್ಟರ ಮಟ್ಟಿಗೆ ಸರಿಯಾಗಿದೆ; (ವಿವರ ನೀಡುವುದು)	-ಅನ್ವಯಿಸುವುದಿಲ್ಲ-
ಇ	ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ 2020-21ನೇ ಸಾಲಿನ ಶಾಸಕರಿಗೆ ಮಂಜೂರಾದ ಅನುದಾನವೆಷ್ಟು? (ವಿವರ ಒದಗಿಸುವುದು)	ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ 2020-21ನೇ ಸಾಲಿನಲ್ಲಿ ರೂ.1131.86 ಕೋಟಿಗಳ ಅನುದಾನ ನಿಗದಿಪಡಿಸಲಾಗಿರುತ್ತದೆ. ಆದರೆ ಮಂಡಳಿಯಲ್ಲಿ ಡಾ. ನಂಜುಂಡಪ್ಪ ವರದಿಯನ್ವಯ ಸಿ.ಡಿ.ಐ. ಸೂಚ್ಯಾಂಕ ಆಧಾರದ ಮೇಲೆ ಅನುದಾನವನ್ನು ಹಂಚಿಕೆ ಮಾಡಲಾಗುತ್ತಿದ್ದು, ಅವುಗಳಲ್ಲಿ ಮೈಕ್ರೋ ಅಡಿಯಲ್ಲಿ ತಾಲೂಕಾವಾರು ಹಾಗೂ ಮ್ಯಾಕ್ರೋ ಅಡಿಯಲ್ಲಿ ಜಿಲ್ಲೆವಾರು ಅನುದಾನವನ್ನು ನಿಗದಿಪಡಿಸಲಾಗುತ್ತಿರುವುದರಿಂದ ವಿಧಾನಸಭಾ ಕ್ಷೇತ್ರವಾರು ಅನುದಾನ ಮಂಡಳಿಯಿಂದ ನಿಗದಿಪಡಿಸಿರುವುದಿಲ್ಲ.

ಸಂಖ್ಯೆ: ಪಿಡಿಎಸ್ 88 ಹೆಚ್ ಕೆಡಿ 2021

(ಮುನಿರತ್ನ)
ಸಚಿವರು,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.